ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ.DTE-ADMIOEST(3)/12/2021

ಆಯುಕ್ತರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001,
ದಿನಾಂಕ: 18.03.2021

## ಜ್ಞಾಪನ

ವಿಷಯ: 2020-21ನೇ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರ ಹುದ್ದೆಗಳ ನೇಮಕಾತಿಗೆ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಈ ಕಛೇರಿ ಸುತ್ತೋಲೆ ಸಂಖ್ಯೆ:ಡಿಟಿಇ/23/ಇಎಸ್‌ಟಿ4ಎ/2009. ದಿ:16.10.09
2. ಸರ್ಕಾರಿ ಆದೇಶ ಸಂಖ್ಯೆ: ಇಡಿ/16/ಟಿಪಿಇ/2017, ದಿನಾಂಕ: 11.12.2019.
3. ಸರ್ಕಾರದ ಪತ್ರ ಸಂಖ್ಯೆ: ಇಡಿ 174 ಡಿಟಿಇ 2020, ದಿನಾಂಕ: 22.12.2020
4. ತಾಂತ್ರಿಕ ಶಿಕ್ಷಣ ಇಲಾಖೆಯ ಸುತ್ತೋಲೆ ಸಂಖ್ಯೆ: DTE-ADMIOEST(2B)/32/2020 ದಿ: 15.01.2021
5. ಸಂಸ್ಥೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿರುವುದಕ್ಕೆ ಅನುಮೋದನೆ ನೀಡುವಂತೆ ಕೋರಿ ಸ್ವೀಕೃತವಾಗಿರುವ ಪ್ರಸ್ತಾವನೆಗಳು

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1) ರ ಸುತ್ತೋಲೆಯಲ್ಲಿ ಅರೆಕಾಲಿಕ ಉಪನ್ಯಾಸಕರುಗಳ ಆಯ್ಕೆ ಸಂಬಂಧ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ನೀಡಲಾಗಿದೆ. ಸದರಿ ಸುತ್ತೋಲೆಯಲ್ಲಿ ಸೂಚಿಸಿರುವ ಮಾರ್ಗಸೂಚಿ / ನಿಯಮಗಳ ಪ್ರಕಾರ ಅರೆಕಾಲಿಕ ಉಪನ್ಯಾಸಕರುಗಳನ್ನು ನೇಮಿಸಿಕೊಳ್ಳತಕ್ಕದ್ದು. ಸದರಿ ನಿಯಮ / ಮಾರ್ಗಸೂಚಿಗಳನ್ನು ಉಲ್ಲಂಘಿಸಿ ನೇಮಕ ಮಾಡಿಕೊಂಡಿದ್ದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆಂದು ತಿಳಿಸಲಾಗಿದೆ.

ಉಲ್ಲೇಖ(2) ರ ಸರ್ಕಾರದ ಆದೇಶ ಮತ್ತು ಉಲ್ಲೇಖ(3) ರ ಪತ್ರದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಗರಿಷ್ಠ ಮಾಸಿಕ ಕಾರ್ಯಭಾರ 32 ಗಂಟೆಗೆ ಗರಿಷ್ಠ ಮಾಸಿಕ ಗೌರವ ಧನ ರೂ. 15,000/- ಗಳನ್ನು ಮೀರದಂತೆ ನಿಗದಿಪಡಿಸಿ ಮಂಜೂರಾತಿ ನೀಡಲಾಗಿದೆ.

ಉಲ್ಲೇಖ(4) ರಲ್ಲಿ 2020-21ನೇ ಸಾಲಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ದ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಮಾರ್ಚ್-2021 ರವರೆಗೆ ಮಾತ್ರ ಪ್ರಾಂಶುಪಾಲರ ಹಂತದಲ್ಲಿ ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.

...2/-

ಉಲ್ಲೇಖ(5) ರಂತೆ ಸಂಸ್ಥೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿರುವುದಕ್ಕೆ ಅನುಮೋದನೆ ನೀಡಿ ಭತ್ಯೆ ಮಂಜೂರಾತಿ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. 2020-21ನೇ ಸಾಲಿಗೆ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನಾಗಿ ನೇಮಿಸಿಕೊಂಡಿರುವುದಕ್ಕೆ ಈ ಜ್ಞಾಪನದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿರುವ ಸಂಖ್ಯೆಯಂತೆ ಅನುಮೋದನೆ ನೀಡುತ್ತಾ, ಕಾರ್ಯನಿರ್ವಹಿಸಿರುವ ಅರ್ಹ ಅರೆಕಾಲಿಕ ಉಪನ್ಯಾಸಕರಿಗೆ 2020-21ನೇ ಸಾಲಿಗೆ **ದಿನಾಂಕ: 15.01.2021** ರಿಂದ **ಕಾರ್ಯನಿರ್ವಹಿಸಿದ ಅವಧಿಗೆ** ಇಲಾಖೆಯ **ಲೆಕ್ಕ ಶೀರ್ಷಿಕೆ 2203-00-112-0-02-324** ಅಡಿಯಲ್ಲಿ ಭತ್ಯೆಯನ್ನು ಭರಿಸಲು ಈ ಕೆಳಕಂಡ ಷರತ್ತುಗೊಳಪಟ್ಟು ಅನುಮೋದನೆ ನೀಡಲಾಗಿದೆ.

**ಷರಾ:-** ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಹೊಸದಾಗಿ ಆರಂಭಗೊಂಡಿರುವ ಕೆಳಕಂಡ ಸಂಸ್ಥೆಗಳಲ್ಲಿ ಪೂರ್ಣಕಾಲಿಕ ಹುದ್ದೆಗಳು ಮಂಜೂರಾಗದ ಕಾರಣ ವೇತನ ಬಟವಾಡೆ ಅಧಿಕಾರ ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಹಿತದೃಷ್ಠಿಯಿಂದ ಸಂಸ್ಥೆಯ ಸಮೀಪದ ಸಂಸ್ಥೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನ ಪಾವತಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ.

| ಕ್ರ.ಸಂ. | ಹೊಸದಾಗಿ ಆರಂಭಗೊಂಡಿರುವ ಸಂಸ್ಥೆಯ ಹೆಸರು | ವೇತನ ಬಟವಾಡೆ ಅಧಿಕಾರ ನೀಡಿರುವ ಸಂಸ್ಥೆಯ ಹೆಸರು |
|---|---|---|
| **1.** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ |
| **2.** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | |
| **3.** | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಮೊಸಳೆಹೊಸಹಳ್ಳಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ |

ಷರತ್ತುಗಳು:

1) ಅರೆಕಾಲಿಕ ಉಪನ್ಯಾಸಕರಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಹಾಜರಾತಿ ವಹಿಯನ್ನು ಹಾಗೂ ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದು. ಅರೆಕಾಲಿಕ ಉಪನ್ಯಾಸಕರು ಕಾರ್ಯ ನಿರ್ವಹಿಸಿದ ಅವಧಿಗೆ ಸಂಬಂಧಿಸಿದ ಮೊತ್ತವನ್ನು ಪ್ರೋರಾಟ ಆಧಾರದ ಮೇರೆಗೆ ಅರೆಕಾಲಿಕ ಭತ್ಯೆ ನೀಡತಕ್ಕದು.
2) ಅರೆಕಾಲಿಕ ಉಪನ್ಯಾಸಕರ ನೇಮಕಾತಿಯು ತಾತ್ಕಾಲಿಕವಾಗಿರುತ್ತದೆಯೆಂದೂ, ಪೂರ್ಣಾವಧಿ ಉಪನ್ಯಾಸಕರುಗಳ ನೇಮಕಾತಿಯಾದ ಕೂಡಲೇ ಸದರಿಯವರ ನೇಮಕಾತಿಯನ್ನು ರದ್ದುಪಡಿಸಲಾಗುವುದೆಂದು ಅರೆಕಾಲಿಕ ಉಪನ್ಯಾಸಕರುಗಳಿಂದ ಮುಚ್ಚಳಿಕೆಯನ್ನು ಪಡೆಯತಕ್ಕದ್ದು.
3) ಎಐಸಿಟಿಇ ರೆಗ್ಯೂಲೇಷನ್ಸ್ ಹಾಗೂ ನಿಯಮಾನುಸಾರ ಪ್ರತಿಯೊಂದು ಕೋರ್ಸಿನಲ್ಲಿರುವ ಕಾರ್ಯಭಾರ (ವರ್ಕ್‌ಲೋಡ್) ಅನುಸಾರ ನೇಮಿಸಿಕೊಳ್ಳುವುದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು(ಆಡಳಿತ),**
**ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಇವರಿಗೆ:**

ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಿಸಿದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರಿಗೆ (ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ)

**ಪ್ರತಿ:**

1. ಡಿವಿಪಿ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
3. ಕಛೇರಿ ಪ್ರತಿ.

ಅನುಬಂಧ

2020-21ನೇ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ನೇಮಕ ಮಾಡಿಕೊಂಡಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರುಗಳ ನೇಮಕಾತಿಗೆ ಅನುಮೋದನೆ ನೀಡುವ ಕುರಿತು

| ಕ್ರ.ಸಂ. | ಸಂಸ್ಥೆಯ ಹೆಸರು | ಸಂಸ್ಥೆಯಲ್ಲಿ ಅತಿಥಿ ಉಪನ್ಯಾಸಕರ ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯೆ | ಸಂಸ್ಥೆಯಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿರುವುದಕ್ಕೆ ಅನುಮೋದನೆ ನೀಡಲಾದ ಸಂಖ್ಯೆ |
|---|---|---|---|
| (1) | (2) | (3) | (4) |
| 1 | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 16 | 16 |
| 2 | ಸರ್ಕಾರಿ (ಸಂಜೆ)ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 10 | 10 |
| 3 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | 09 | 07 |
| 4 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | 23 | 23 |
| 5 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | 18 | 16 |
| 6 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ | 20 | 14 |
| 7 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | 18 | 18 |
| 8 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ | 17 | 14 |
| 9 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | 46 | 46 |
| 10 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ | 34 | 28 |
| 11 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 24 | 24 |
| 12 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | 24 | 15 |
| 13 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | 14 | 12 |
| 14 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಮೊಸಳೆಹೊಸಹಳ್ಳಿ | 13 | 13 |

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು